# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು -02.

ಸಂಖ್ಯೆ: ಜೆಡಿನಿಕಪ (ದ)/ಪ್ರಾ.ಪ/ಸನಿ/38/2019-20 ದಿನಾಂಕ: 12-12-2019.

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಖಾತೆ ಸಂಖ್ಯೆ. 6372/81/2, ಕೆಂಗೇರಿ ಗ್ರಾಮ, ಕೆಂಗೇರಿ ಹೋಬಳಿ, ವಾರ್ಡ್ ನಂ. 198, ರಾಜರಾಜೇಶ್ವರಿನಗರ ವಲಯ, ಬೆಂಗಳೂರು ಇಲ್ಲಿ ನಿರ್ಮಿಸಲಾಗುತ್ತಿರುವ ವಸತಿ ಸಮುಚ್ಚಯ, ವಾಣಿಜ್ಯ (ಆಫೀಸ್) ಮತ್ತು ಹಾಸ್ಟೆಲ್ ಮಿಶ್ರ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 21-11-2019.

2) ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/JD South/ 0008/19-20 ದಿ: 07-11-2019.

3) ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರ ಅನುಮೋದನೆ ದಿನಾಂಕ: 09-12-2019.

*****

ಖಾತೆ ಸಂಖ್ಯೆ. 6372/81/2, ಕೆಂಗೇರಿ ಗ್ರಾಮ, ಕೆಂಗೇರಿ ಹೋಬಳಿ, ವಾರ್ಡ್ ನಂ. 198, ರಾಜರಾಜೇಶ್ವರಿನಗರ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ಎರಡು ಸಾಮಾನ್ಯ ತಳ ಮಹಡಿಯನ್ನೊಳಗೊಂಡಂತೆ ಬ್ಲಾಕ್ ಎ ರಲ್ಲಿ ನೆಲ+ಮೇಲಿನ 4 ಅಂತಸ್ತುಗಳ 161 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ಮತ್ತು ಬ್ಲಾಕ್ ಬಿ ರಲ್ಲಿ ನೆಲ+ಮೇಲಿನ 4 ಅಂತಸ್ತುಗಳಲ್ಲಿ ನೆಲ+ಮೇಲಿನ 2 ಅಂತಸ್ತುಗಳಲ್ಲಿ ವಾಣಿಜ್ಯ (ಆಫೀಸ್) ಕಟ್ಟಡ ಹಾಗೂ 3ನೇ ಮತ್ತು 4ನೇ ಅಂತಸ್ತುಗಳಲ್ಲಿ 18 ಕೊಠಡಿಗಳುಳ್ಳ ಹಾಸ್ಟೆಲ್ ಮಿಶ್ರ ಉಪಯೋಗದ ಕಟ್ಟಡ ನಿರ್ಮಿಸಲು ದಿನಾಂಕ: 07-11-2019 ರಂದು ಪರಿಷ್ಕೃತ ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ. ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ಮಿಶ್ರ ಉಪಯೋಗದ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 04-12-2019 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಆಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಆಗತ್ಯ ಶುಲ್ಕವಾದ ರೂ. 1,56,000/-ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000143 ದಿನಾಂಕ: 11-12-2019 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಮಿಶ್ರ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

12/12/19

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

12/12/19. 12/12/19 12/12/19



Scanned with CamScanner

3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

4) ಪರಿಷ್ಕೃತ ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

5) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

6) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.

7) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

8) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ
M/s. Vaastu Properties
Rep by its Shivana Gouda Patil & Others
# 627, 14th Cross, J.P. Nagar
1st Phase, Bangalore – 560 078.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು / ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

12/12/19

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

12/12/19. 12/12/19 12/12/19



Scanned with CamScanner